ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 20–11–2021**

## ಮಾಧ್ಯಮ ಆಹ್ವಾನ

## Media Invitation

**ಕರ್ನಾಟಕ ವಿಧಾನ ಸಭೆಯ ಸನ್ಮಾನ್ಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ, ಕಾಗೇರಿ ಅವರಿಂದ**

**ಪತ್ರಿಕಾಗೋಷ್ಠಿ :**

ದಿನಾಂಕ : 21–11–2021, ಭಾನುವಾರ, ಸಮಯ : ಬೆಳಿಗ್ಗೆ 11.30 ಗಂಟೆಗೆ

ಸ್ಥಳ : ಕೊಠಡಿ ಸಂಖ್ಯೆ: 106, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು

## ಪತ್ರಿಕಾ ಪ್ರಕಟಣೆ

**PRESS RELEASE**

### ದಿವ್ಯಾಂಗರಿಗೆ ಸರ್ಕಾರದ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸಿ: ಗೌರವಾನ್ವಿತ ರಾಜ್ಯಪಾಲರು

**ಬೆಂಗಳೂರು. ನವೆಂಬರ್ 20(ಕರ್ನಾಟಕ ವಾರ್ತೆ):**

ಭಾರತ ಸರಕಾರ ಮತ್ತು ರಾಜ್ಯ ಸರ್ಕಾರ ದಿವ್ಯಾಂಗರ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ದಿವ್ಯಾಂಗರು ಸರ್ಕಾರದ ಯೋಜನೆಗಳು ಹಾಗೂ ಸವಲತ್ತುಗಳು ಸಮರ್ಪಕವಾಗಿ ಬಳಸಿಕೊಂಡು ತಮ್ಮ ಜೀವನವನ್ನು ಸುಧಾರಿಸಿಕೊಳ್ಳಲು ಮುಂದಾಗಬೇಕು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಯೋಜನೆಗಳ ಬಗ್ಗೆ ದಿವ್ಯಾಂಗರಿಗೆ ಅರಿವು ಮೂಡಿಸಬೇಕು ಎಂದು ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಇಂದು ಬೆಂಗಳೂರಿನ ಕನಕಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ನ ಆಯುರ್ವೇದ ಆಸ್ಪತ್ರೆಯಲ್ಲಿ ಆರ್ಟ್ ಆಫ್ ಲಿವಿಂಗ್ ಫೌಂಡೇಶನ್, ಭಗವಾನ್ ಮಹಾವೀರ್ ವಿಕಲಾಂಗ್ ಸಹಾಯತಾ ಸಮಿತಿ, ರೋಟರಿ ಕ್ಲಬ್ ಬೆಂಗಳೂರು, ಎಸ್‌ಬಿಐ ಮ್ಯೂಚುವಲ್ ಫಂಡ್ ಜಂಟಿಯಾಗಿ ಆಯೋಜಿಸಿದ್ದ ಉಚಿತ ಗಾಲಿಕುರ್ಚಿ ವಿತರಣೆಯ ಮೆಗಾ ಶಿಬಿರವನ್ನು ಅವರು ಉದ್ಘಾಟಿಸಿ ಮಾತನಾಡಿದರು.

ದಿವ್ಯಾಂಗರು ಇತರರಿಗಿಂತ ವಿಶೇಷ ಸಾಮರ್ಥ್ಯ ಹೊಂದಿರುತ್ತಾರೆ. ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಮೂಲಕ ದೇಶದ ಅಭಿವೃದ್ಧಿಯಲ್ಲಿ ಪಾಲುದಾರರನ್ನಾಗಿ ಮಾಡುವುದು ನಮ್ಮ ಗುರಿಯಾಗಿದೆ. ಗೌರವಾನ್ವಿತ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿ ಅವರ ಸಮರ್ಥ ನಾಯಕತ್ವದಲ್ಲಿ ಸಬ್ಕಾ ಸಾಥ್ ಸಬ್ಕಾ ವಿಕಾಸ್ ಮಂತ್ರವನ್ನು ಅರಿತುಕೊಂಡ ಭಾರತ ಸರ್ಕಾರವು ಸಮಾಜದಲ್ಲಿನ ದಿವ್ಯಾಂಗರು ಸೇರಿದಂತೆ ದೇಶದ ಪ್ರತಿಯೊಬ್ಬ ನಾಗರಿಕನ ಬೆಳವಣಿಗಾಗಿ ಅಭೂತಪೂರ್ವ ಕಾರ್ಯವನ್ನು ಮಾಡುತ್ತಿರುವುದು ಶ್ಲಾಘನೀಯ ಎಂದರು.

ಭಾರತ ಸರ್ಕಾರದ ವಿಕಲಚೇತನರ ಸಬಲೀಕರಣ ಇಲಾಖೆಯಲ್ಲಿ ವಿವಿಧ ಯೋಜನೆಗಳ ಮೂಲಕ ದೇಶಾದ್ಯಂತ 10668ಕ್ಕೂ ಹೆಚ್ಚು ಶಿಬಿರಗಳನ್ನು ಆಯೋಜಿಸಿ, 20 ಲಕ್ಷ 35 ಸಾವಿರಕ್ಕೂ ಹೆಚ್ಚು ಫಲಾನುಭವಿಗಳಿಗೆ ಪರಿಕರಗಳನ್ನು ಒದಗಿಸಲಾಗಿದೆ. ಅಲ್ಲದೇ, ಸರಕಾರ ಹಿರಿಯ ನಾಗರಿಕರಿಗೆ ಕಾನೂನು ರೂಪಿಸುವ ಜತೆಗೆ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಮಾಹಿತಿ ನೀಡಿದರು.

ದಿವ್ಯಾಂಗರ ಸಬಲೀಕರಣಕ್ಕಾಗಿ ಸರಕಾರದ ಜತೆಗೆ ಹಲವು ಸ್ವಯಂಸೇವಾ ಸಂಸ್ಥೆಗಳೂ ಶ್ರಮಿಸುತ್ತಿವೆ. ಭಗವಾನ್ ಮಹಾವೀರ್ ವಿಕಲಾಂಗ್ ಸಹಾಯತಾ ಸಮಿತಿಯು ದಿವ್ಯಾಂಗರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವದ ಅತಿದೊಡ್ಡ ಸರ್ಕಾರೇತರ ಸಂಸ್ಥೆಯಾಗಿದೆ. ಸಂಸ್ಥೆಯು 1975 ರಲ್ಲಿ ರಾಜಸ್ಥಾನದ ಜೈಪುರದಲ್ಲಿ ಸ್ಥಾಪನೆಯಾಯಿತು, ಅಂದಿನಿಂದ ಇಲ್ಲಿಯವರೆಗೂ ಅನೇಕ ಸಾಧನೆಗಳನ್ನು ಮಾಡಿದೆ. ಕಳೆದ 46 ವರ್ಷಗಳಲ್ಲಿ ಸುಮಾರು 20 ಲಕ್ಷ ದಿವ್ಯಾಂಗರಿಗೆ ಸಂಸ್ಥೆಯಿಂದ ವಿವಿಧ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಆರ್ಥಿಕವಾಗಿ ಬಡತನ ಹೊಂದಿರುವ ಕುಟುಂಬದವರು ಈ ಪ್ರಯೋಜನ ಪಡೆದುಕೊಂಡಿದ್ದಾರೆ. ಇಂಡಿಯಾ ಫಾರ್ ಹ್ಯೂಮಾನಿಟಿ ಪ್ರಾಜೆಕ್ಟ್ ಅಡಿಯಲ್ಲಿ ಅನೇಕ ಶಿಬಿರಗಳನ್ನು ಆಯೋಜಿಸುವ ಮೂಲಕ ಇಡೀ ವಿಶ್ವದಲ್ಲೇ ದೇಶದ ಗೌರವ ಹೆಚ್ಚಿಸಿರುವುದು ಹೆಮ್ಮೆಯ ಸಂಗತಿ ಎಂದ ಅವರು, ಸಂಸ್ಥೆಯ ಕಾರ್ಯಕ್ಕೆ ಅಭಿನಂದನೆಗಳನ್ನು ಸಲ್ಲಿಸಿದರು.

ಇದೇ ರೀತಿ ದಿವ್ಯಾಂಗರನ್ನು ಗುರುತಿಸಿ, ಸರ್ಕಾರದ ಸೌಲಭ್ಯಗಳನ್ನು ಒದಗಿಸಿದರೆ, ಅವರ ಮುಖದಲ್ಲಿ ಸಂತೋಷ ಮೂಡಿ ಬರುವುದರ ಜೊತೆಗೆ ಸ್ವಾಭಿಮಾನದ ಬದುಕು ಜೀವಿಸಲು ಸಹಕಾರಿಯಾಗುತ್ತದೆ ಎಂದು ಅಭಿಪ್ರಯಾಪಟ್ಟರು.

ಕಾರ್ಯಕ್ರಮದಲ್ಲಿ ಆರ್ಟ್ ಆಫ್ ಲಿವಿಂಗ್ ನ ರವಿಶಂಕರ್ ಗುರೂಜಿ, ಭಗವಾನ್ ಮಹಾವೀರ್ ವಿಕಲಾಂಗ್ ಸಹಾಯತಾ ಸಮಿತಿಯ ಸಂಸ್ಥಾಪಕರಾದ ಡಿ.ಆರ್ ಮೆಹ್ತಾ, ರೋಟರಿ ಸಂಸ್ಥೆಯ ಜಿಲ್ಲಾ ಗವರ್ನರ್ ಫಾಜಲ್ ಮೊಹಮ್ಮದ್, ರೋಟರಿ ಕ್ಲಬ್ ಬೆಂಗಳೂರು ಜಿಲ್ಲಾ ಅಧ್ಯಕ್ಷರಾದ ನರ್ಮದಾ ನಾರಾಯಣ, ಆರ್ಟ್ ಆಫ್ ಲಿವಿಂಗ್ ಟ್ರಸ್ಟ್ ನ ಚೇರ್ ಮನ್ ಹರ್ಷ, ಎಸ್ ಬಿಐ ನ ಗುರುಪ್ರೀತ್ ಸಿಂಗ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

**ಛಾಯಾಚಿತ್ರ ಶೀರ್ಷಿಕೆ:**

Shri Thaawarchand Gehlot, Hon. Governor of Karnataka inaugurated the Mega Free Camp for wheelchair distribution which was jointly organized by Art of Living Foundation, Bhagwan Mahaveer Viklang Sahayata Samiti, Rotary Club, SBI Mutual Fund at Ayurveda hospital , Bengaluru today.

ಇಂದು ಬೆಂಗಳೂರಿನ ಆಯುರ್ವೇದ ಆಸ್ಪತ್ರೆಯಲ್ಲಿ ಆರ್ಟ್ ಆಫ್ ಲಿವಿಂಗ್ ಫೌಂಡೇಶನ್, ಭಗವಾನ್ ಮಹಾವೀರ್ ವಿಕಲಾಂಗ್ ಸಹಾಯತಾ ಸಮಿತಿ, ರೋಟರಿ ಕ್ಲಬ್, ಎಸ್‌ಬಿಐ ಮ್ಯೂಚುವಲ್ ಫಂಡ್ ಜಂಟಿಯಾಗಿ ಆಯೋಜಿಸಿದ್ದ ಉಚಿತ ಗಾಲಿಕುರ್ಚಿ ವಿತರಣೆಯ ಮೆಗಾ ಶಿಬಿರವನ್ನು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಉದ್ಘಾಟಿಸಿದರು.

## ವಿಧಾನಸಭೆ ಅಧಿವೇಶನ

**ಬೆಂಗಳೂರು, ನವೆಂಬರ್ 20 (ಕರ್ನಾಟಕ ವಾರ್ತೆ) :**

15ನೇ ವಿಧಾನಸಭೆಯ ಹನ್ನೊಂದನೇ ಅಧಿವೇಶನವು, 2021 ಡಿಸೆಂಬರ್ 13ರ ಸೋಮವಾರ ಬೆಳಿಗ್ಗೆ 11.00 ಗಂಟೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಸಮಾವೇಶಗೊಳ್ಳಲಿದೆ ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿ (ಪ್ರ) ಎಂ.ಕೆ. ವಿಶಾಲಾಕ್ಷಿ ಅವರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಜಾಗತಿಕ ಭಾಷೆಗಳ ಕಲಿಕಾ ವ್ಯವಸ್ಥೆ- ಜಪಾನಿ ನಿಯೋಗದ ಭೇಟಿ

ಬೆಂಗಳೂರು, ನವೆಂಬರ್ 20 (ಕರ್ನಾಟಕ ವಾರ್ತೆ) :

ಜಪಾನ್ ಸರ್ಕಾರದ ಅಂಗಸಂಸ್ಥೆಯಾದ ಜಪಾನ್ ಅಂತಾರಾಷ್ಟ್ರೀಯ ಸಹಕಾರದ ಏಜೆನ್ಸಿಯ (ಜೆಐಸಿಎ) ಜಪಾನೀ ನಿಯೋಗವು ಶ್ರೀಮತಿ ಇಕೆಡಾ ಮುತ್ಸುಕೊ ಅವರ ನೇತೃತ್ವದಲ್ಲಿ ಜೊಯಂಟಾ ರಾಭಾ ಅವರೊಂದಿಗೆ ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿತ್ತು. ಬಿ.ಸಿ.ಯುನ ಜಾಗತಿಕ ಭಾಷಾ ವಿಭಾಗದಲ್ಲಿ ಜಪಾನೀ ಭಾಷಾ ಬೋಧನೆಯ ಕಾರ್ಯಕ್ರಮವನ್ನು ಉತ್ತೇಜಿಸುವ ನಿಟ್ಟಿನಲ್ಲಿ ನಿಯೋಗವು ಮಹತ್ವದ ಚರ್ಚೆ ನಡೆಸಿತು.

ನಿಯೋಗವು ಬೆಂಗಳೂರು ನಗರ ವಿಶ್ವವಿದ್ಯಾಲಯದ ಕುಲಪತಿಯವರಾದ ಪ್ರೊ. ಲಿಂಗರಾಜ ಗಾಂಧಿ, ಕುಲಸಚಿವರಾದ ಶ್ರೀಧರ್ ಮತ್ತು ಪ್ರೊ. ರಮೇಶ್ (ಮೌಲ್ಯಮಾಪನ) ಅವರನ್ನು ಭೇಟಿಯಾಗಿ ಮಾಹಿತಿ ವಿನಿಮಯ ಮತ್ತು ಸಹಕಾರದ ಕುರಿತಂತೆ ಚರ್ಚಿಸಿತು. ಕುಲಪತಿಯವರು ನಿಯೋಗವನ್ನು ಆತ್ಮೀಯವಾಗಿ ಸ್ವಾಗತಿಸಿ ಬರಮಾಡಿಕೊಂಡರು.

ಕಳೆದ ತಿಂಗಳು ಸ್ಪಾನಿಷ್ ನಿಯೋಗವು ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿದ ಬೆನ್ನಲ್ಲೇ ಜಪಾನಿ ನಿಯೋಗವು ಕ್ಯಾಂಪಸ್‌ಗೆ ಭೇಟಿಯಿತ್ತು ಶೈಕ್ಷಣಿಕ ಸಹಕಾರದ ಬಗ್ಗೆ ವಿಸ್ತೃತ ಸಮಾಲೋಚನೆ ನಡೆಸಿದೆ. ಜಪಾನಿ ಭಾಷಾ ಬೋಧನೆಗೆ ಸ್ಥಳೀಯ ಶಿಕ್ಷಕರನ್ನು ನೇಮಿಸಿಕೊಳ್ಳುವ ಪ್ರಕ್ರಿಯೆ ಬಗ್ಗೆಯೂ ನಿಯೋಗವು ಪರಾಮರ್ಶಿಸಿತು.

ಜಾಗತಿಕ ಭಾಷೆಗಳ ಕಲಿಕೆಯ ಮೂಲಕ ಆರ್ಥಿಕತೆ, ವ್ಯಾಪಾರ, ವಾಣಿಜ್ಯ, ರಾಜತಾಂತ್ರಿಕ ಸಂಬಂಧಗಳು ಮತ್ತು ಸಂಸ್ಕೃತಿ ಕ್ಷೇತ್ರದಲ್ಲಿ ಅಂತಾರಾಷ್ಟ್ರೀಯ ಉದ್ಯೋಗವಕಾಶಗಳನ್ನು ತಮ್ಮದಾಗಿಸಿಕೊಂಡು ಜಾಗತಿಕ ಪ್ರಜೆಗಳಾಗಿ ಬೆಳೆಯುವ ನಿಟ್ಟಿನಲ್ಲಿ ನಮ್ಮ ವಿದ್ಯಾರ್ಥಿಗಳು ಹೆಚ್ಚಿನ ಆಸಕ್ತಿ ವಹಿಸಬೇಕಾದ ಅಗತ್ಯವನ್ನು ಪ್ರೊ. ಲಿಂಗರಾಜ ಗಾಂಧಿಯವರು ಒತ್ತಿ ಹೇಳಿದರು. ಭಾರತ ಮತ್ತು ಜಪಾನ್ ನಡುವಿನ ಸಾಮಾಜಿಕ-ಸಾಂಸ್ಕೃತಿಕ ಸಂಬಂಧವನ್ನು ಮತ್ತಷ್ಟು ಬಲವರ್ಧನೆಗೊಳಿಸಲು ಭಾಷಾ ಕಲಿಕೆ ಕಾರ್ಯಕ್ರಮ ಪೂರಕವಾಗಲಿದ್ದು ಆದಷ್ಟು ಬೇಗನೆ ಸೂಕ್ತ ಏರ್ಪಾಡು ಮಾಡುವುದಾಗಿ ಅವರು ನಿಯೋಗಕ್ಕೆ ಭರವಸೆಯತ್ತರು.

ಶಿಕ್ಷಣ ಮತ್ತು ತಂತ್ರಜ್ಞಾನದ ಸಮಗ್ರ ದೃಷ್ಟಿಕೋನದ ಸಮನ್ವಯ ಹಾಗೂ ಶಿಕ್ಷಣದಲ್ಲಿ ಆರೋಗ್ಯದ ಅಗತ್ಯಗಳ ಬಗ್ಗೆಯೂ ಹೆಚ್ಚಿನ ಗಮನ ಹರಿಸಬೇಕಾದ ಪ್ರಾಮುಖ್ಯತೆಯನ್ನು ಕುಲಪತಿಯವರು ಪ್ರತಿಪಾದಿಸಿದರು. ಬೆಂಗಳೂರು ನಗರ ವಿಶ್ವವಿದ್ಯಾಲಯದ ಜಾಗತಿಕ ಭಾಷೆಗಳ ಅಧ್ಯಯನ ಕೇಂದ್ರದ ಮುಖ್ಯಸ್ಥರಾದ ಶ್ರೀಮತಿ ಜ್ಯೋತಿ ವೆಂಕಟೇಶ್‌ರವರು ಜಪಾನಿ ನಿಯೋಗದೊಂದಿಗೆ ಆನ್‌ಲೈನ್ ಸಂವಾದ ನಡೆಸಿ 2022ರ ಆರಂಭದಲ್ಲಿ ಶೈಕ್ಷಣಿಕ ಸಹಭಾಗಿತ್ವದ ಪ್ರಸ್ತಾಪಗಳನ್ನು ಅನುಷ್ಠಾನಗೊಳಿಸುವ ವಿಶ್ವಾಸವನ್ನು ವ್ಯಕ್ತಪಡಿಸಿದರು.

## ಕೇರಳ ರಾಜ್ಯಕ್ಕೆ ಕೊಡಗು ಜಿಲ್ಲೆಯ ಮೂಲಕ ಸಾರಿಗೆ ಸೇವೆಗಳು ಪುನರಾರಂಭ

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ ಕೇರಳ ರಾಜ್ಯಕ್ಕೆ ಕಾರ್ಯಾಚರಣೆಯಾಗುವ ಬೆಂಗಳೂರು-ಕಣ್ಣಾನೂರು, ಬೆಂಗಳೂರು-ಕಾಸರಗೂಡು, ಬೆಂಗಳೂರು-ಕನ್ಹಗಾಡ್ ಸಾರಿಗೆಗಳನ್ನು ಸಾರ್ವಜನಿಕ ಪ್ರಯಾಣಿಕರುಗಳ ಅನುಕೂಲಕ್ಕಾಗಿ ನವೆಂಬರ್ 17, 2021 ರಿಂದ ಪುನರಾರಂಭಿಸಲಾಗಿದೆ.

ಕಾಸರಗೂಡಿಗೆ ನಾನ್ ಎ.ಸಿ. ಸ್ಲೀಪರ್ ಬಸ್ಸು ಬೆಂಗಳೂರಿನಿಂದ ಬಿಡುವ ಸಮಯ ರಾತ್ರಿ 20.00 ಗಂಟೆಗೆ, ಎ.ಸಿ. ಸ್ಲೀಪರ್ ಬಸ್ಸು ಬಿಡುವ ಸಮಯ ರಾತ್ರಿ 21.15 ಗಮ್ಯ ಸ್ಥಳ ತಲುಪುವ ಸಮಯ ಬೆಳಿಗ್ಗೆ 05.45, ಕಣ್ಣಾನೂರಿಗೆ ಎ.ಸಿ. ಸ್ಲೀಪರ್ ಬಸ್ಸು ಬೆಂಗಳೂರಿನಿಂದ ಬಿಡುವ ಸಮಯ ರಾತ್ರಿ 21.00 ಗಂಟೆಗೆ ಗಮ್ಯ ಸ್ಥಳ ತಲುಪುವ ಸಮಯ ಬೆಳಿಗ್ಗೆ 06.30, ಕಾನ್ಹಗಾಡ್ ಗೆ ವೋಲ್ವೋ ಬಸ್ಸು ಬೆಂಗಳೂರಿನಿಂದ ಬಿಡುವ ಸಮಯ ರಾತ್ರಿ 21.00 ಗಂಟೆಗೆ, ಗಮ್ಯ ಸ್ಥಳ ತಲುಪುವ ಸಮಯ ಬೆಳಿಗ್ಗೆ 06.30 ವೇಳಾಪಟ್ಟಿಯಂತೆ ಪ್ರಾರಂಭಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Restored Bus services to Kerala state

Bengaluru, November 20 (Karnataka Information):

Karnataka State Road Transport Corporation has restored Bus services to Kerala state on the routes Bengaluru to Cannanore, Bengaluru to Kanhangad, Bengaluru to Kasaragod with effect from 17/11/2021. Hence, it is requested to arrange to publish the above information for the convenience of travelling public in major news papers.

| **Destination** | **Class of Service** | **Departure time from Bengaluru** | **Arrival at end place** |
|---|---|---|---|
| Bengaluru to Kasaragod | Non A.C Sleeper | 2000 | 0545 |
| | A.C. Sleeper | 2115 | 0545 |
| Bengaluru to Cannanore | A.C. Sleeper | 2100 | 0630 |
| Bengaluru to Kanhangad | Volvo | 2100 | 0630 |

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ**

ಬೆಂಗಳೂರು, ನವೆಂಬರ್ 20 (ಕರ್ನಾಟಕ ವಾರ್ತೆ) :

**ದಿನಾಂಕ: 20.11.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 53 | ತೃಪ್ತಿಕರ | CO |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 102 | ಸಾಧಾರಣ | $NO_2$ |
| 3 | ಕವಿಕ, ಮೈಸೂರುರಸ್ತೆ | 80 | ತೃಪ್ತಿಕರ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 53 | ತೃಪ್ತಿಕರ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 95 | ತೃಪ್ತಿಕರ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 63 | ತೃಪ್ತಿಕರ | CO |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 33 | ಉತ್ತಮ | CO |
| **(20.11.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | * | * | * |
| 9 | ಪೀಣ್ಯ | 64 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | 76 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| ಉತ್ತಮ (0–50) | ಕನಿಷ್ಠ ಪರಿಣಾಮ |
| ತೃಪ್ತಿಕರ (51–100) | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| ಸಾಧಾರಣ (101–200) | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| ಕಳಪೆ (201–300) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| ಅತಿ ಕಳಪೆ (301–400) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| ತೀವ್ರ (>401) | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 20.11.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 53 | Satisfactory | CO |
| 2 | Jayanagar 5th Block, Shalini ground | 102 | Moderate | $NO_2$ |
| 3 | KAVIKA, Mysore Road | 80 | Satisfactory | CO |
| 4 | Rajeev Gandhi Institute of Chest Disease, NIMHANS, Hombegowda Nagar | 53 | Satisfactory | CO |
| 5 | HSR Layout, near Central Silkboard | 95 | Satisfactory | CO |
| 6 | City Railway Station, Magestic, Bengaluru | 63 | Satisfactory | CO |
| 7 | Saneguruvanahalli, NisargaBhavan, KSPCB, Shivanagara | 33 | Good | CO |
| **(20.11.2021 at 10.05 AM)** | | | | |
| 8 | BWSSB, Kadabesanahalli | * | * | * |
| 9 | Peenya | 64 | Satisfactory | $PM_{2.5}$ |
| 10 | BTM Layout | 76 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older adults | Severe (>401) | Respiratory effects even on healthy people |